ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ
ನ್ಯಾಯಾಲಯ, ಕಡೂರು
ಸಿ.ಸಿ.1739/2016

| | | | |
|---|---|---|---|
| ಸಾಕ್ಷಿದಾರರ ಹೆಸರು | ರಾಜು | ಪ್ರಮಾಣ ಮಾಡಿದ ದಿನಾಂಕ | 07.11.2023 |
| ತಂದೆಯ ಹೆಸರು | ಮಂಜುನಾಥ | | |
| ವಯಸ್ಸು | 41 ವರ್ಷ | | |
| ವೃತ್ತಿ | ಚಾಲಕ | ಚಾಸಾ | 3 |
| ವಾಸಸ್ಥಳ | ಬಿಸಲೇಹಳ್ಳಿ | ಪ್ರಾಸಾ | 1 |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-**

ಆರೋಪಿಗಳ ಪರಿಚಯ ಇರುತ್ತದೆ. ನಾನು ಯಾವುದೇ ಘಟನೆಯನ್ನು ನೋಡಿರುವುದಿಲ್ಲ ಮತ್ತು ನನ್ನ ಮುಂದೆ ಯಾವುದೇ ಜಗಳ ಆಗಿರುವುದಿಲ್ಲ.ನಾನು ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸಸಅ ಅವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀಸವಾಲುಃ ಮಾನ್ಯ ಸಸಅ. ರವರಿಂದ ಃ**

ದಿಃ08.05.2016 ರಂದು ಬೆಳಗ್ಗೆ 10.30 ಗಂಟೆಗೆ ಚಾಸಾ-1 ರವರು ಚಾಸಾ-2 ರವರ ಮನೆ ಬಳಿ ಇರುವಾಗ 1 ನೇ ಆರೋಪಿಯು ಮನೆಯ ಮುಂದಿನ ಖಾಲಿ ಜಾಗದ ವಿಚಾರದಲ್ಲಿ ಜಗಳ ತೆಗೆದು, ಚಾಸಾ-2 ರವರಿಗೆ ಹಿಡಿ ಗಾತ್ರದ ಕಲ್ಲಿನಿಂದ ಹೊಡೆದರು ಎಂದರೆ ಸರಿಯಲ್ಲ. 2 ಮತ್ತು 3 ನೇ ಆರೋಪಿಗಳು 2 ಅಡಿ ಉದ್ದದ ಕಾಡು ಜಾತಿಯ ದೊಣ್ಣೆಯಿಂದ ಹೊಡೆದರು ಎಂದರೆ ಸರಿಯಲ್ಲ. 4 ಮತ್ತು 5 ನೇ ಆರೋಪಿಗಳು ಚಾಸಾ-2 ರವರಿಗೆ ಮೈಕೈಗೆ ಹೊಡೆದರು ಎಂದರೆ ಸರಿಯಲ್ಲ. ಚಾಸಾ-2 ರವರಿಗೆ ನಿನ್ನನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಲ್ಲ. ಆಗ ನಾನು ಮತ್ತು ಚಾಸಾ-4 ಅಲ್ಲೇ ಇದ್ದು ಜಗಳವನ್ನು ಬಿಡಿಸಿದೆವು ಎಂದರೆ ಸರಿಯಲ್ಲ. ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ-1 ಎಂದು ಗುರುತಿಸಲಾಯಿತು.

**ಪಾಟೀ ಸವಾಲು :- ಆರೋಪಿಗಳ ಪರ ವಕೀಲರು ಯಾವುದೇ ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ
ಸಹಿ/-
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಕಡೂರು